ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1322
ಸದಸ್ಯರ ಹೆಸರು	:	ಶ್ರೀ ಆರ್ ಧರ್ಮಸೇನ
ಉತ್ತರಿಸುವ ದಿನಾಂಕ	:	24.12.2021
ಉತ್ತರಿಸುವ ಸಚಿವರು	:	ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ನ್ಯಾಯಮೂರ್ತಿ ಸದಾಶಿವ ಆಯೋಗದ ವರದಿಯನ್ನು ಜಾರಿಗೊಳಿಸುವ ವಿಚಾರದಲ್ಲಿ ಸರ್ಕಾರದ ನಿಲುವೇನು; ಯಾವಾಗ ಜಾರಿಗೊಳಿಸಲಾಗುವುದು;	ನ್ಯಾಯಮೂರ್ತಿ ಶ್ರೀ ಎ.ಜೆ. ಸದಾಶಿವ ಆಯೋಗವನ್ನು ದಿನಾಂಕ:24.09.2005ರಂದು ರಚಿಸಲಾಗಿತ್ತು. ಸದರಿ ಆಯೋಗವು ದಿನಾಂಕ:14.06.2012ರಲ್ಲಿ ಸರ್ಕಾರಕ್ಕೆ ವರದಿಯನ್ನು ನೀಡಿರುತ್ತದೆ. ದಿನಾಂಕ:15.02.2018ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿ ಸದರಿ ವರದಿಯನ್ನು ಸಮಗ್ರವಾಗಿ ಪರಿಶೀಲಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸಚಿವ ಸಂಪುಟದ ಒಂದು ಉಪ ಸಮಿತಿಯನ್ನು ರಚಿಸಲು ನಿರ್ಣಯ ಕೈಗೊಳ್ಳಲಾಗಿದ್ದು, ಅದರಂತೆ ಸಚಿವ ಸಂಪುಟದ ಉಪ ಸಮಿತಿಯನ್ನು ದಿನಾಂಕ:08.03.202018ರಲ್ಲಿ ರಚಿಸಲಾಗಿತ್ತು. ಆದರೆ, ತದನಂತರ ಸರ್ಕಾರಗಳು ಬದಲಾದ ಹಿನ್ನೆಲೆಯಲ್ಲಿ ಪ್ರಸ್ತುತ ಸಚಿವ ಸಂಪುಟ ಉಪ ಸಮಿತಿಯನ್ನು ಪುನರ್ ರಚಿಸುವ ಬಗ್ಗೆ ಕ್ರಮ ವಹಿಸಲಾಗುತ್ತಿದೆ.
ಆ)	ಈ ವರದಿಯನ್ನು ಶೀಘ್ರದಲ್ಲಿ ಸಚಿವ ಸಂಪುಟದ ಉಪ ಸಮಿತಿ ಮುಂದೆ ಜಾರಿಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದೆಂದು ಸದನದಲ್ಲಿ ಪ್ರಸ್ತಾಪಸಿದ್ದರೂ ಇನ್ನೂ ನಿರ್ಧಾರ ಕೈಗೊಳ್ಳದಿರಲು ಕಾರಣವೇನು;	
ಇ)	ಪರಿಶಿಷ್ಟ ಜಾತಿಯ ಎಡಗೈ ಜನಾಂಗದವರು ಬಹಳ ವರ್ಷಗಳಿಂದ ಈ ವರದಿಯನ್ನು ಜಾರಿಗೆ ತರಬೇಕೆಂದು ಒತ್ತಾಯಿಸುತ್ತಿರುವುದು ನಿಜವೇ; ಶೀಘ್ರದಲ್ಲೇ ಜಾರಿಗೆ ತರಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಸದ್ಯದಲ್ಲೆ ಜಾರಿಗೊಳಿಸಲಾಗುವುದೇ?	

ಸಕಇ 285 ಎಸ್ ಎಡಿ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ
ಸಚಿವರು